ಇ) ಅಬಕಾರಿ ಇಲಾಖೆಯವರು ಎಷ್ಟು ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ ಹಾಗೂ ಎಷ್ಟನ್ನು ಬಿಡುಗಡೆ ಮಾಡಿದ್ದಾರೆ?

ಶ್ರೀ ತಿಪ್ಪೇಸ್ವಾಮಿ (ಅಬಕಾರಿ ಸಚಿವರು) :

ಅ) 1,597 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.

ಆ) 1,597 ಮೊಕದ್ದಮೆಗಳು ದಾಖಲು ಮಾಡಿದೆ.

ಇ) 248 ವಾಹನಗಳನ್ನು ವಶಪಡಿಸಿಕೊಂಡು 118 ವಾಹನಗಳನ್ನು ಬಿಡುಗಡೆ ಮಾಡಿದೆ.

ಸಿ.ಓ.ಡಿ. ತನಿಖೆಗಳಿಗೆ ಒಳಪಡಿಸಿದ ಪ್ರಕರಣಗಳು

434 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಬೆಳ್ಳಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಿಂದ ಸಿ.ಓ.ಡಿ. ತನಿಖೆಗೆ ಆಳವಡಿಸಿದ ಪ್ರಕರಣಗಳು ಎಷ್ಟು?

ಆ) ಅವುಗಳಲ್ಲಿ ಎಷ್ಟು ಪ್ರಕರಣಗಳು ವಿಚಾರಣೆ ಪೂರ್ಣಗೊಂಡು ಸರ್ಕಾರಕ್ಕೆ ವರದಿ ಬಂದಿದೆ.

ಇ) ಆ ವರದಿಗಳ ಆಧಾರದ ಮೇಲೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೆಷ್ಟು ಹಾಗೂ ಎಷ್ಟು ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರದವರು ಕ್ರಮ ಕೈಗೊಂಡಿರುವರು.

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಗೃಹ ಸಚಿವರು) :

ಅ) 746 ಪ್ರಕರಣಗಳನ್ನು ಸಿ.ಓ.ಡಿ. ತನಿಖೆಗೆ ವಹಿಸಲಾಗಿದೆ (1-1-92 ರಿಂದ 31-7-95 ರವರೆಗೆ)

ಆ) 500 ಪ್ರಕರಣಗಳು

ಇ) ಸದರಿ 500 ಪ್ರಕರಣಗಳಲ್ಲಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಗಳಿಗೆ ವರದಿಯನ್ನು ಕಳಿಸಲಾಗಿದೆ. ಈ ಬಗ್ಗೆ ತೆಗೆದುಕೊಂಡ ಕ್ರಮದ ಬಗ್ಗೆ ವಿವಿಧ ಇಲಾಖೆಗಳಿಂದ ಮಾಹಿತಿಯನ್ನು ಸಂಗ್ರಹಿಸಬೇಕಾಗಿರುವುದರಿಂದ ಕಾಲಾವಕಾಶ ಬೇಕಾಗಿರುತ್ತದೆ.

ಹೇಮಾವತಿ ಯೋಜನೆ ಪೂರ್ಣಗೊಳಿಸುವ ಬಗ್ಗೆ

432 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) :ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) 1995-96ನೇ ಸಾಲಿನಲ್ಲಿ ಹೇಮಾವತಿ ಯೋಜನೆಯಡಿಯಲ್ಲಿ ತುಮಕೂರು ವಲಯಕ್ಕೆ 110 ಕೋಟಿ ಹಣವನ್ನು ಖರ್ಚುಮಾಡಲು ಆಯವ್ಯಯದಲ್ಲಿ ಒದಗಿಸಲಾಗಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಕಳೆದ ನಾಲ್ಕು ತಿಂಗಳಿಂದ ಇಲ್ಲಿಯವರೆಗೆ ಸರ್ಕಾರದವರು ಎಷ್ಟು ಹಣ ಖರ್ಚು ಮಾಡಿರುತ್ತಾರೆ. ಹಾಗೂ ಬಾಕಿ ಹಣವನ್ನು ಖರ್ಚು ಮಾಡಲು ರೂಪಿಸಿಕೊಂಡಿರುವ ಯೋಜನೆಗಳೇನು?

ಇ) ಅದರಲ್ಲಿ ಟೆಂಡರ್ ಕೊಟ್ಟಿರುವ ಮತ್ತು ತುಂಡುಗುತ್ತಿಗೆ ಕಾಮಗಾರಿಗಳೆಷ್ಟು ಮತ್ತು ಅದರ ಮೊತ್ತವೆಷ್ಟು?